# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ "ಮೀನು ಉತ್ಪಾದನೆಯನ್ನು ಹೆಚ್ಚಿಸಲು ಮೀನುಗಾರರಿಗೆ ಸಹಾಯ" ಎಂಬ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ.

ಓದಲಾಗಿದೆ:- (1) ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯ ರಾಜ್ಯ ಮಟ್ಟದ ಯೋಜನಾ ಅನುಮೋದನಾ ಸಮಿತಿಯ ದಿನಾಂಕ: 16-06-2016 ರ ಸಭೆಯ ನಡವಳಿ.

(2) ಕೃಷಿ ಇಲಾಖೆ ಆದೇಶ ಸಂಖ್ಯೆ: ಎಜಿಡಿ/121/ಎಎಂಎಸ್/2016 ದಿನಾಂಕ: 04-08-2016.

(3) ಪತ್ರ ಸಂಖ್ಯೆ: ಮೀನಿ/ಆರ್‌ಕೆವಿವೈ/13/2016, ದಿನಾಂಕ: 19-08-2016.

R.KVY

-9 NOV 2016

C-7533

******

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 16-06-2016 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ "ಮೀನು ಉತ್ಪಾದನೆಯನ್ನು ಹೆಚ್ಚಿಸಲು ಮೀನುಗಾರರಿಗೆ ಸಹಾಯ" ಎಂಬ ಯೋಜನೆಯನ್ನು ರೂ.100.00 ಲಕ್ಷ ವೆಚ್ಚದಲ್ಲಿ ಅನುಷ್ಠಾನಗೊಳಿಸಲು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯ 14ನೇ ರಾಜ್ಯ ಮಟ್ಟದ ಮಂಜೂರಾತಿ ಸಮಿತಿಯು ಅನುಮೋದನೆ ನೀಡಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಆದೇಶದಲ್ಲಿ, ಮೀನುಗಾರಿಕೆ ಇಲಾಖೆಗೆ 2016-17ನೇ ಸಾಲಿನಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಮೊದಲನೇ ಕಂತಾಗಿ ರೂ.1.70 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರ ಪತ್ರದಲ್ಲಿ, ಕರಾವಳಿ ಮತ್ತು ಒಳನಾಡು ಜಲಸಂಪನ್ಮೂಲಗಳನ್ನು ಸಮರ್ಪಕವಾಗಿ ಬಳಸಿಕೊಂಡು ರಾಜ್ಯದ ಮೀನು ಉತ್ಪಾದನೆಯನ್ನು ಹೆಚ್ಚಿಸಿ, ಮೀನುಗಾರರ ಸಾಮಾಜಿಕ-ಆರ್ಥಿಕ ಶ್ರೇಯೋಭಿವೃದ್ಧಿಯನ್ನು ಸಾಧಿಸುವುದು ಮೀನುಗಾರಿಕೆ ಇಲಾಖೆಯ ಪ್ರಮುಖ ಧ್ಯೇಯೋದ್ದೇಶಗಳಲ್ಲಿ ಒಂದಾಗಿರುತ್ತದೆ. ಆದ್ದರಿಂದ, ಮೇಲ್ಕಂಡ ಯೋಜನೆಯನ್ನು ಹಮ್ಮಿಕೊಳ್ಳಗಿದ್ದು, ಈ ಯೋಜನೆಯಡಿ (1) ಒಳನಾಡು ಮೀನುಗಾರರಿಗೆ ಫೈಬರ್‌ಗ್ಲಾಸ್ ದೋಣಿ ವಿತರಣೆ ಮತ್ತು (2) ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ ಎಂಬ 2 ಘಟಕಗಳನ್ನು ಹೊಂದಿದ್ದು, ಒಳನಾಡು ಮೀನುಗಾರರಿಗೆ ಫೈಬರ್‌ಗ್ಲಾಸ್ ದೋಣಿ ವಿತರಣೆ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/168/ಮೀಇಯೋ/2013, ದಿನಾಂಕ: 31-08-2013ರ ಪ್ರಕಾರ ಹಾಗೂ ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/105/ಮೀಇಯೋ/2009, ದಿನಾಂಕ: 16-07-2009 ಹಾಗೂ ಪಸಂಮೀ/170/ ಮೀಇಯೋ/2013 ದಿನಾಂಕ: 04-09-2013 ರ ಪ್ರಕಾರ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲು ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ 169 ಮೀಇಯೋ 2016, ಬೆಂಗಳೂರು ದಿನಾಂಕ: 07-11-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ "ಮೀನು ಉತ್ಪಾದನೆಯನ್ನು ಹೆಚ್ಚಿಸಲು ಮೀನುಗಾರರಿಗೆ ಸಹಾಯ" ಎಂಬ ಯೋಜನೆಯ (1) ಒಳನಾಡು ಮೀನುಗಾರರಿಗೆ ಫೈಬರ್‌ಗ್ಲಾಸ್ ದೋಣಿ ವಿತರಣೆ ಮತ್ತು (2) ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ ಎಂಬ 2 ಘಟಕಗಳನ್ನು ರೂ.100.00 ಲಕ್ಷ (ಒಂದುನೂರು ಲಕ್ಷ ರೂಪಾಯಿಗಳು ಮಾತ್ರ)ಗಳಲ್ಲಿ ಸದರಿ ಯೋಜನೆಯಡಿ ಈಗಾಗಲೇ ಹೊರಡಿಸಲಾದ ಆದೇಶಗಳಲ್ಲಿ ಇಲಾಖಾ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿದೆ.

ಈ ಯೋಜನೆಯಡಿ ಉಂಟಾಗುವ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2401-00-800-1-57ರಡಿ ಮೀನುಗಾರಿಕೆ ಇಲಾಖೆಗೆ ಬಿಡುಗಡೆ ಮಾಡುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ದಿನಾಂಕ: 16-06-2016 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ 14ನೇ ರಾಜ್ಯ ಮಟ್ಟದ ಮಂಜೂರಾತಿ ಸಮಿತಿ ಸಭೆಯ ನಿರ್ಣಯದಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

7/11/16

(ರಶ್ಮಿ ಶಿವಶಂಕರ ಪೋಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

07/11/16

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು
4) ಎಲ್ಲಾ ಮೀನುಗಾರಿಕೆ ಉಪ ನಿರ್ದೇಶಕರುಗಳಿಗೆ - ಮೀನುಗಾರಿಕೆ ನಿರ್ದೇಶಕರ ಮುಖಾಂತರ.
5) ಆಂತರಿಕ ಆರ್ಥಿಕ ಸಲಹೆಗಾರರು, ಪಸಂಮೀ ಇಲಾಖೆ.
6) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
7) ಶಾಖಾ ರಕ್ಷಾ ಕಡತ / ಸಮನ್ವಯ-ಕಂಪೆಂಡಿಯಂ / ಹೆಚ್ಚಿನ ಪ್ರತಿಗಳು.